ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತಮೂರನೆಯ ಅಧಿವೇಶನ
ಮಂಗಳವಾರ, ದಿನಾಂಕ: 2ನೇ ಫೆಬ್ರವರಿ, 2021

ಬೀದರ್ ಜಿಲ್ಲೆಯಲ್ಲಿ ಅನ್ನ ಭಾಗ್ಯ ಯೋಜನೆಯಲ್ಲಿ ನಡೆಯುತ್ತಿರುವ ಅವ್ಯವಹಾರದ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :-

160(213) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಬಡವರ ಹಸಿವು ನೀಗಿಸಲು ಅನ್ನ ಭಾಗ್ಯ ಯೋಜನೆಯಡಿಯಲ್ಲಿ ಸರ್ಕಾರ ವಿತರಿಸುತ್ತಿರುವ ಅಪಾರ ಪ್ರಮಾಣದ ಅಕ್ಕಿ ಮಧ್ಯವರ್ತಿಗಳ ಪಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಅನ್ನ ಭಾಗ್ಯ ಯೋಜನೆಯಡಿಯಲ್ಲಿ ಬಿ.ಪಿ.ಎಲ್., ಹಾಗೂ ಎ.ಪಿ.ಎಲ್., ಮತ್ತು ಅಂತ್ಯೋದಯ ಕಾರ್ಡುದಾರರಿಗೆ ವಿತರಿಸುವ ಅಕ್ಕಿಯಲ್ಲಿ ಸಾವಿರಾರು ಟನ್‌ಗಟ್ಟಲೆ ಉಳಿಕೆಯಾಗುತ್ತಿದ್ದು, ಕೆಲವು ಅಧಿಕಾರಿಗಳು ಹಾಗೂ ನ್ಯಾಯಬೆಲೆ ಅಂಗಡಿ ಮಾಲೀಕರು ಸರ್ಕಾರಕ್ಕೆ ತಪ್ಪು ಲೆಕ್ಕ ತೋರಿಸಿ ಈ ಅಕ್ಕಿಯನ್ನು ಕಬಳಿಸುತ್ತಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ;

(ಇ) ಈ ಕ್ರಮವನ್ನು ತಪ್ಪಿಸಲು ಹಾಗೂ ಬಡವರಿಗೆ ಈ ಯೋಜನೆಯನ್ನು ಸಂಪೂರ್ಣವಾಗಿ ತಲುಪುವಂತೆ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಈ) ಸುಳ್ಳು ಲೆಕ್ಕ ತೋರಿಸಿ ಕಾಳ ಸಂತೆಯಲ್ಲಿ ಅನ್ನ ಭಾಗ್ಯದ ಅಕ್ಕಿಯನ್ನು ಮಾರಾಟ ಮಾಡುವ ಅಧಿಕಾರಿಗಳ ಅಂಗಡಿ ಮಾಲೀಕರ ಹಾಗೂ ಮಧ್ಯವರ್ತಿಗಳ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳುವುದು ? (ಸ್ಪಷ್ಟ ವಿವರ ನೀಡುವುದು)